ವ್ರತೆ ಪತಿವ್ರತೆ ತ್ರಿನೆತ್ರೆ ರಕ್ತಾಂಬರೆ
ಶತಪತ್ರನಯನೆ ನಿರುತ ಕನ್ಯೆ ಉದಯಾರ್ಕ
ಶತಕೋಟಿ ಸನ್ನಿಭೆ ಹರಿಯಾಂಕಸಂಸ್ಥೆ
ಶ್ರುತಿತತಿ ನುತೆ ಶುಕ್ಲ ಶೋಣಿತ ರಹಿತೆ ಅ
ಪ್ರತಿಹತೆ ಸರ್ವದಾ ಸಂಚಾರಿಣಿ ಚತುರೆ
ಚತುರ ಕಪರ್ದಿಯೆ ಅಂಭ್ರಣಿ ಹ್ರೀ
ಉತ್ಪತಿ ಸ್ಥಿತಿಲಯ ಕರ್ತೆ ಶುಭ್ರಶೋಭನ ಮೂರ್ತೆ
ಪತಿತಪಾವನೆ ಧನ್ಯೆ ಸರ್ವೌಷಧಿಯಲಿದ್ದು
ಹತಮಾಡು ಕಾಡುವ ರೋಗಗಳಿಂದ
ಕ್ಷಿತಿಯೊಳು ಸುಖದಲ್ಲಿ ಬಾಳುವ ಮತಿ ಇತ್ತು
ಸತತ ಕಾಯಲಿ ಬೇಳು ದುರ್ಗೇ ದುರ್ಗೇ
ಚ್ಯುತದೂರ ವಿಜಯ ವಿಠ್ಠಲರೆಯನ ಪ್ರೀಯೆ
ಕೃತಾಂಜಲಿಯಿಂದಲಿ ತಲೆಬಾಗಿ ನಮಿಸುವೆ ||೩||
ಅಷ್ಟ ತಾಳ
ಶ್ರೀ ಲಕ್ಷ್ಮೀ ಕಮಲಾ ಪದ್ಮಾಪದ್ಮಿನಿ ಕಮ
ಲಾಲಯೆ ರಮಾ ವೃಷಾಕಪಿ ಧನ್ಯವೃದ್ಧಿ ವಿ-
ಶಾಲ ಯಜ್ಞಾ ಇಂದಿರೆ ಹಿರಣ್ಯ ಹರಿಣಿ
ವಾಲಯ ಸತ್ಯ ನಿತ್ಯಾನಂದ ತ್ರಯಿ ಸುಧಾ
ಶೀಲೆ ಸುಗಂಧ ಸುಂದರಿ ವಿದ್ಯಾ ಸುಶೀಲೆ
ಸುಲಕ್ಷಣ ದೇವಿ ನಾನಾ ರೂಪಗಳಿಂದ ಮೆರೆವ ಮೃತ್ಯುನಾಶೆ
ವಾಲಗಕೊಡು ಸಂತರ ಸನ್ನಿಧಿಯಲ್ಲಿ
ಕಾಲಕಾಲಕೆ ಎನ್ನ ಭಾರಪೊಹಿಸುವ ತಾಯಿ
ಮೇಲು ಮೇಲು ನಿನ್ನ ಶಕ್ತಿ ಕೀರ್ತಿ ಬಲು
ಕೇಳಿ ಕೇಳಿ ಬಂದೆ ಕೇವಲ ಈ ಮನ
ಘಾಳಿಯಂತೆ ಪರದ್ರವ್ಯಕ್ಕೆ ಪೋಪುದು
ಎಳಲ ಮಾಡದೆ ಉದ್ಧಾರ ಮಾಡುವ